FEBRUARY 19, 2026

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ಸರ್ಕಾರ, ರೈತರ** ಅನುಕೂಲಕ್ಕಾಗಿ ಹಾಗೂ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ, ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹೇಳಿದ್ದಾರೆ.
ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ 19 ಕೆರೆಗಳು, ಕೂಡ್ಲಿಗಿ ತಾಲೂಕಿನ 74 ಕೆರೆಗಳಿಗೆ ತುಂಗಭದ್ರಾ ಜಲಾಶಯದಿಂದ ನೀರು ತುಂಬಿಸುವ 870 ಕೋಟಿ ರೂಪಾಯಿ ಯೋಜನೆಗೆ ಚಾಲನೆ ನೀಡಲಾಗಿದೆ, ಹೆಚ್.ಎನ್ ವ್ಯಾಲಿ ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲೂಕಿನ 164 ಕೆರೆಗಳಿಗೆ ಜಲ ಮರುಪೂರಣ ಯೋಜನೆ ಕೈಗೊಳ್ಳಲಾಗಿದೆ ಎಂದು ಅವರು ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. ರಾಜ್ಯದ ಕೆರೆಗಳ ಜಲ ಮರುಪೂರಣ ಯೋಜನೆಗಳು, ಸರ್ಕಾರದ 7 ನೇ ಗ್ಯಾರಂಟಿಯಾಗಿದ್ದು, ಏಷ್ಯಾ ಖಂಡದಲ್ಲೇ ಉತ್ತಮ ಕಾರ್ಯವನ್ನು ರಾಜ್ಯದಲ್ಲಿ ಮುನ್ನಡೆಸಲಾಗಿದೆ ಎಂದರು.

<><><>

**ಪತ್ರಕರ್ತರು ಸತ್ಯವನ್ನು** ಮರೆಮಾಚಬಾರದು; ಮಾಧ್ಯಮಗಳ ಮೇಲೆ ಜನರು ಇಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳುವುದು, ಪತ್ರಿಕಾ ರಂಗದ ಮೂಲ ಧರ್ಮವಾಗಿದೆ ಎಂದು ಗೃಹಸಚಿವ ಡಾಕ್ಟರ ಜಿ. ಪರಮೇಶ್ವರ್ ಹೇಳಿದರು. ತುಮಕೂರು ನಗರದ, ಕೇಂದ್ರ ಗ್ರಂಥಾಲಯ ಸಭಾಂಗಣದಲ್ಲಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ –ಕೆಯುಡಬ್ಲ್ಯುಜೆ ಜಿಲ್ಲಾ ಘಟಕ, ಆಯೋಜಿಸಿದ, ಅಕ್ಷರ ನಿಧಿ ಪ್ರತಿಭಾ ಪುರಸ್ಕಾರ ಹಾಗೂ ಡಾಕ್ಟರ ಜಿ.ಪರಮೇಶ್ವರ್–ಕನ್ನಿಕಾ ಪರಮೇಶ್ವರಿ ಪ್ರತಿಭಾ ಪುರಸ್ಕಾರ ಪ್ರದಾನ ಸಮಾರಂಭದಲ್ಲಿ, ಪತ್ರಕರ್ತರ ಪ್ರತಿಭಾವಂತ ಮಕ್ಕಳನ್ನು ಸನ್ಮಾನಿಸಿ ಅವರು ಮಾತನಾಡಿದರು. ಸಾಮಾಜಿಕ ಜಾಲತಾಣಗಳ ಮೂಲಕ ವದಂತಿ ಹಾಗೂ ಸುಳ್ಳು ಸುದ್ದಿ ಹಬ್ಬಿಸುವವರ ವಿರುದ್ಧ ಕ್ರಮ ಕೈಗೊಳ್ಳಲು ಕಾಯಿದೆ ಶೀಘ್ರದಲ್ಲೇ ಜಾರಿಗೆ ತರಲಾಗುವುದು ಎಂದರು.

<><><>

**ಇಂದು ಛತ್ರಪತಿ ಶಿವಾಜಿ** ಮಹಾರಾಜರ ಜಯಂತಿ. ಕನ್ನಡ ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ, ಇಂದು ಸಂಜೆ 6 ಗಂಟೆಗೆ ಬೆಂಗಳೂರು, ಜೆ.ಸಿ ರಸ್ತೆಯ ರವೀಂದ್ರ ಕಲಾಕ್ಷೇತ್ರದಲ್ಲಿ, ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

**ಧಾರವಾಡದ, ಭಾರತ ಪ್ರೌಢಶಾಲೆಯ** ಆವರಣದಲ್ಲಿ, ಮರಾಠಾ ವಿದ್ಯಾಪ್ರಸಾರಕ ಮಂಡಳ ವತಿಯಿಂದ, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ, ಛತ್ರಪತಿ ಶಿವಾಜಿ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್, ಜಯಂತ್ಯುತ್ಸವದ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಛತ್ರಪತಿ ಶಿವಾಜಿ ಮಹಾರಾಜರ ವ್ಯಕ್ತಿತ್ವ ಹಾಗೂ ಕೃತಿತ್ವದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಸಂಶೋಧಕ ಹಾಗೂ ಧಾರವಾಡದ ಜ್ಞಾನಯೋಗಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ, ಸತೀಶ ಜಾಧವ

<><><>

**ಧಾರವಾಡದ, ಡಾಕ್ಟರ ಪುಟ್ಟರಾಜ ಗವಾಯಿ** ಪ್ರತಿಷ್ಠಾನ ಕೊಡಮಾಡುವ, ಪುಟ್ಟರಾಜ ಸಮ್ಮಾನ ಪ್ರಶಸ್ತಿಗೆ ವಯಲಿನ್ ವಾದಕ ಪಂಡಿತ್ ಬಿ.ಎಸ್ ಮಠ ಆಯ್ಕೆಯಾಗಿದ್ದಾರೆ. ಪ್ರಶಸ್ತಿ 1 ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ಮಾರ್ಚ್ 3 ರಂದು ಹುಬ್ಬಳ್ಳಿಯಲ್ಲಿ ಆಯೋಜಿತ ಪುಟ್ಟರಾಜ ಕವಿ ಗವಾಯಿಯವರ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ.

<><><>

**ಮುಸ್ಲಿಂ ಬಾಂಧವರ, ಪವಿತ್ರ ರಂಜಾನ್** ಮಾಸಾಚರಣೆ ಆರಂಭಗೊಂಡಿದೆ. ರಂಜಾನ್ ಮಾಸಾಚರಣೆಯು ನಂಬಿಕೆ ಹಾಗೂ ಸೇವೆಯ ಸಂಕಲ್ಪವನ್ನು ಸಾಕಾರಗೊಳಿಸಲಿ, ಭ್ರಾತೃತ್ವ ಹಾಗೂ ವಿಶ್ವಾಸವನ್ನು ದೃಢಗೊಳಿಸಲಿ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಮ್ಮ ಎಕ್ಸ್ ಖಾತೆ ಮೂಲಕ ಶುಭ ಹಾರೈಸಿದ್ದಾರೆ.

<><><>

**ರಾಜ್ಯದಲ್ಲಿ, ಎಸ್.ಎಸ್.ಎಲ್.ಸಿ ಪರೀಕ್ಷೆಗಳು** ಸಮೀಪಿಸುತ್ತಿದ್ದು, ಮಕ್ಕಳ ಶೈಕ್ಷಣಿಕ ಪ್ರಕ್ರಿಯೆಯಲ್ಲಿ, 10ನೇ ತರಗತಿಯ ಪರೀಕ್ಷೆ, ಮಹತ್ವದ ಹಂತವಾಗಿದೆ. ಪರೀಕ್ಷೆಗೆ 40 ದಿನಗಳು ಬಾಕಿ ಇದ್ದು, ಪೋ ‘ಕರು ತಮ್ಮ ಮಕ್ಕಳಿಗೆ ‘ಓದುವಂತೆ ಪ್ರೋತ್ಸಾಹಿಸಬೇಕು’ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ

ಹೇಳಿದ್ದಾರೆ. ಪ್ರಕಟಣೆಯಲ್ಲಿ ಈ ಮಾಹಿತಿ ಹಂಚಿಕೊಂಡಿರುವ ಅವರು, ಪರೀಕ್ಷಾ ಭಯ ಹೋಗಲಾಡಿಸುವ ನಿಟ್ಟಿನಲ್ಲಿ 'ಆಪ್ತ ಸಮಾಲೋಚನೆ ನಡೆಸಲಾಗುತ್ತಿದೆ' ಎಂದು ತಿಳಿಸಿದ್ದಾರೆ.

<><><>

**ಬೆಂಗಳೂರು, ಕರ್ನಾಟಕ ಬ್ಯಾಡ್ಮಿಂಟನ್** ಅಸೋಸಿಯೇಶನ್ ಕೆ.ಬಿ.ಎ ಮೈದಾನದಲ್ಲಿ ಆಯೋಜಿತ, ಸಿ.ಎಂ ಕಪ್ ಬ್ಯಾಡ್ಮಿಂಟನ್ ಕ್ರೀಡಾಕೂಟ ನಾಡಿದ್ದು, 21 ರಂದು ಆರಂಭವಾಗಲಿದೆ. ಎರಡು ದಿನಗಳ ಕಾಲ ನಡೆಯಲಿರುವ ಪಂದ್ಯಾವಳಿಯ ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗೊಳಿಸಿ, ಪಂದ್ಯಾವಳಿಗೆ ಶುಭ ಹಾರೈಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>